ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 864

ವಿಧಾನ ಪರಿಷತ್ತು ಸದಸ್ಯರ ಹೆಸರು : ಶ್ರೀ ಸುನೀಲ್ ವಲ್ಯಾಪುರ್
(ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸಬೇಕಾದ ದಿನಾಂಕ : 09.03.2021

ಉತ್ತರಿಸುವ ಸಚಿವರು : ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು.

ಕ್ರ. ಸಂ	ಪ್ರಶ್ನೆ	ಉತ್ತರ
ಅ	ಕಲಬುರಗಿ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಪಡಿತರ ಅಂಗಡಿಯಲ್ಲಿ ಅವ್ಯವಹಾರ ನಡೆದಿರುವ ಬಗ್ಗೆ ಸ್ವೀಕೃತವಾದ ದೂರುಗಳ ಸಂಖ್ಯೆ ಎಷ್ಟು; ಇದರಲ್ಲಿ ಎಷ್ಟು ಆರೋಪಗಳು ಸಾಬೀತಾಗಿವೆ; (ತಾಲ್ಲೂಕುವಾರು, ಗ್ರಾಮವಾರು ವಿವರ ನೀಡುವುದು)	ಕಲಬುರಗಿ ಜಿಲ್ಲೆಯಲ್ಲಿ ಪಡಿತರ ಅಂಗಡಿಯಲ್ಲಿ ಅವ್ಯವಹಾರ ನಡೆದಿರುವ ಬಗ್ಗೆ ಕಳೆದ ಮೂರು ವರ್ಷಗಳಲ್ಲಿ ಒಟ್ಟು 72 ದೂರುಗಳು ಸ್ವೀಕೃತವಾಗಿರುತ್ತದೆ. ಈ ಪೈಕಿ 45 ನ್ಯಾಯಬೆಲೆ ಅಂಗಡಿಗಳನ್ನು ಅಮಾನತ್ತುಪಡಿಸಲಾಗಿರುತ್ತದೆ. ಈ ಪೈಕಿ ಅವ್ಯವಹಾರ ಸಾಬೀತಾಗಿರುವ 2 ನ್ಯಾಯಬೆಲೆ ಅಂಗಡಿಗಳ ಪ್ರಾಧಿಕಾರವನ್ನು ರದ್ದುಪಡಿಸಲಾಗಿರುತ್ತದೆ. ತಾಲ್ಲೂಕುವಾರು, ಗ್ರಾಮವಾರು ವಿವರಗಳನ್ನು ಅನುಬಂಧ-01, 02 ಮತ್ತು 03 ರಲ್ಲಿ ಒದಗಿಸಲಾಗಿದೆ.
ಆ.	ಅವ್ಯವಹಾರ ಮಾಡಿರುವುದು ಸಾಬೀತಾದ ಪಡಿತರ ಅಂಗಡಿಯ ವಿರುದ್ಧ ಸರ್ಕಾರದ ಕೈಗೊಂಡ ಕ್ರಮಗಳೇನು? (ತಾಲ್ಲೂಕುವಾರು, ಗ್ರಾಮವಾರು ವಿವರ ನೀಡುವುದು)	ಅವ್ಯವಹಾರ ಸಾಬೀತಾಗಿರುವ 2 ನ್ಯಾಯಬೆಲೆ ಅಂಗಡಿ ಪ್ರಾಧಿಕಾರವನ್ನು ರದ್ದುಪಡಿಸಲಾಗಿರುತ್ತದೆ. ವಿವರವನ್ನು ಅನುಬಂಧ-02 ರಲ್ಲಿ ಒದಗಿಸಲಾಗಿದೆ.

ಆನಾಸ 12 ಆನಾಸ 2021 (ಇ-ಆಫೀಸ್)

(ಉಮೇಶ ವಿ. ಕತ್ತಿ)
ಆಹಾರ, ನಾಗರಿಕ ಸರಬರಾಜು ಮತ್ತು
ಗ್ರಾಹಕರ ವ್ಯವಹಾರಗಳ ಹಾಗೂ
ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು.